## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಹೈದರಾಬಾದ್ ಕರ್ನಾಟಕ ಪ್ರದೇಶದ ಸಾರ್ವಜನಿಕರಿಗೆ ಪರಿಚ್ಛೇದ 371(ಜೆ) ರಡಿಯಲ್ಲಿ ನೇಮಕಾತಿಯಲ್ಲಿ ಮೀಸಲಾತಿಗಾಗಿ ವಸತಿ ಮತ್ತು ಅರ್ಹತಾ ಪ್ರಮಾಣ ಪತ್ರವನ್ನು ನಾಡಕಛೇರಿ ತಂತ್ರಾಂಶದ ಮೂಲಕ ವಿತರಿಸುವ ಬಗ್ಗೆ.

**ಓದಲಾಗಿದೆ:**
1. ಹೈದರಾಬಾದ್ ಕರ್ನಾಟಕ ವಿಶೇಷ ಕೋಶ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012; ದಿನಾಂಕ: 06.11.2013.
2. ಹೈದರಾಬಾದ್ ಕರ್ನಾಟಕ ವಿಶೇಷ ಕೋಶ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013; ದಿನಾಂಕ: 07.01.2014.
3. 2015-16 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ ಸಂಖ್ಯೆ: 369.

-****-

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1) & (2)ರ ಅಧಿಸೂಚನೆಗಳನ್ವಯ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013 ಮತ್ತು ಇತರೆ ನಿಯಮಗಳನ್ವಯ, ಹೈದರಾಬಾದ್ ಕರ್ನಾಟಕದಲ್ಲಿ ಜನಿಸಿ ವಾಸಿಸಿದವರಿಗೆ ನೇಮಕಾತಿಗಾಗಿ ಮೀಸಲಾತಿಯನ್ನು ಕಲ್ಪಿಸಲು ಪರಿಚ್ಛೇದ 371(ಜೆ) ರಡಿಯಲ್ಲಿ ವಸತಿ ಪ್ರಮಾಣ ಪತ್ರವನ್ನು ತಹಶೀಲ್ದಾರರಿಂದ ಮತ್ತು ಅರ್ಹತಾ ಪ್ರಮಾಣ ಪತ್ರಗಳನ್ನು ಉಪವಿಭಾಗದ ಸಹಾಯಕ ಆಯುಕ್ತರಿಂದ ಪಡೆಯಬೇಕಾಗಿರುತ್ತದೆ.

ಅದರಂತೆ, ಪ್ರಸ್ತುತ ಇರುವ ವ್ಯವಸ್ಥೆಯಲ್ಲಿ ಅರ್ಜಿದಾರರು ವಸತಿ ಪ್ರಮಾಣ ಪತ್ರಕ್ಕಾಗಿ ಅರ್ಜಿಯನ್ನು ತಹಶೀಲ್ದಾರರ ಕಛೇರಿಯಲ್ಲಿ ಹಾಗೂ ಅರ್ಹತಾ ಪ್ರಮಾಣ ಪತ್ರಗಳಿಗಾಗಿ ಸಹಾಯಕ ಆಯುಕ್ತರ ಕಛೇರಿಯಲ್ಲಿ ಕೈಬರಹದ ಮೂಲಕ ಸಂಬಂಧಪಟ್ಟ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸ ಬೇಕಾಗಿರುತ್ತದೆ. ಸದರಿ ದಾಖಲೆಗಳನ್ನು ಕ್ಷೇತ್ರ ಪರಿಶೀಲನೆಗೊಳಪಡಿಸಿದ ನಂತರ ಕೈಬರಹದಲ್ಲಿ ನೀಡಿದ ಪ್ರಮಾಣ ಪತ್ರಗಳನ್ನು ತಾಲ್ಲೂಕು ಕಛೇರಿ ಮತ್ತು ಉಪವಿಭಾಗಾಧಿಕಾರಿಗಳ ಕಛೇರಿಯಲ್ಲಿ ವಿತರಿಸಲಾಗುತ್ತಿದೆ.

ಆದರೆ, ಈ ವ್ಯವಸ್ಥೆಯಿಂದಾಗಿ ಅರ್ಜಿದಾರರು ಅವರಿಗೆ ಅಗತ್ಯವಿರುವ ಪ್ರಮಾಣ ಪತ್ರಗಳನ್ನು ನಿಗದಿತ ಅವಧಿಯಲ್ಲಿ ಪಡೆಯಲು ಸಾಧ್ಯವಾಗದೆ ತಾಲ್ಲೂಕು ಕಛೇರಿ ಹಾಗೂ ಉಪವಿಭಾಗಾಧಿಕಾರಿಗಳ ಕಛೇರಿಗಳಿಗೆ ಆಗ್ಗಿಂದಾಗ್ಗೆ ಭೇಟಿ ನೀಡಿ ಆರ್ಥಿಕ ತೊಂದರೆಯನ್ನು ಅನುಭವಿಸಬೇಕಾದ ಪರಿಸ್ಥಿತಿ ಒದಗುತ್ತದೆ. ಅಲ್ಲದೇ, ಅವರ ಅರ್ಜಿಯು ಯಾವ ಹಂತದಲ್ಲಿ ಬಾಕಿಯಿರುತ್ತದೆ ಎಂಬ ಬಗ್ಗೆ ಅರ್ಜಿ ಸ್ಥಿತಿಯನ್ನು ತಿಳಿಯಲು ಅಸಾಧ್ಯವಾಗುತ್ತದೆ.

ಆದ್ದರಿಂದ, ಸಾರ್ವಜನಿಕರಿಗೆ ಈ ಮೇಲ್ಕಂಡಂತೆ ಉಂಟಾಗಿರುವ ತೊಂದರೆಯನ್ನು ನಿವಾರಿಸಲು ಅರ್ಜಿದಾರರು ವಸತಿ ಪ್ರಮಾಣ ಪತ್ರ ಮತ್ತು ಅರ್ಹತಾ ಪ್ರಮಾಣ ಪತ್ರಗಳಿಗಾಗಿ ಸಲ್ಲಿಸಬೇಕಾಗಿರುವ ಅರ್ಜಿಯನ್ನು ಮತ್ತು ಪ್ರಮಾಣ ಪತ್ರಗಳನ್ನು ನಾಡಕಛೇರಿಯ ತಂತ್ರಾಂಶದಲ್ಲಿ ಅಳವಡಿಸಲು 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿರುತ್ತದೆ.

ಪು.ತಿ.ನೋ...

ಈ ವ್ಯವಸ್ಥೆಯಲ್ಲಿ ಅರ್ಜಿದಾರರಿಂದ ಪ್ರಮಾಣ ಪತ್ರಗಳಿಗಾಗಿ ಅರ್ಜಿಯನ್ನು ತಂತ್ರಾಂಶದ ಮೂಲಕ ಪಡೆದು ವಿದ್ಯುನ್ಮಾನವಾಗಿ ಸಹಿ ಮಾಡಿದ ಪ್ರಮಾಣ ಪತ್ರಗಳನ್ನು ತಂತ್ರಾಂಶದ ಮೂಲಕವೇ ನೀಡಬಹುದಾಗಿರುತ್ತದೆ. ಇದರಿಂದಾಗಿ ಹೈದರಾಬಾದ್ ಕರ್ನಾಟಕ ಪ್ರದೇಶದ ಸಾರ್ವಜನಿಕರು ನೇಮಕಾತಿಯಲ್ಲಿ ಮೀಸಲಾತಿಯನ್ನು ಪಡೆಯಲು ಪರಿಚ್ಛೇದ 371(ಜೆ) ರಡಿಯಲ್ಲಿ ಒದಗಿಸಬೇಕಾಗಿರುವ ವಸತಿ ಪ್ರಮಾಣ ಪತ್ರ ಮತ್ತು ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆಯಲು ತಹಶೀಲ್ದಾರರ ಕಛೇರಿ ಮತ್ತು ಉಪವಿಭಾಗಾಧಿಕಾರಿಗಳ ಕಛೇರಿಗೆ ಅಲೆದಾಡುವ ಪರಿಸ್ಥಿತಿಯನ್ನು ತಪ್ಪಿಸುವುದಲ್ಲದೇ ಅವರ ಅರ್ಜಿಯ ಸ್ಥಿತಿಗತಿಯನ್ನು ತಂತ್ರಾಂಶದ ಮೂಲಕ ತಿಳಿಯಲು ಅವಕಾಶವಿರುತ್ತದೆ.

ಆದ್ದರಿಂದ, ಇನ್ನು ಮುಂದೆ ಹೈದರಾಬಾದ್ ಕರ್ನಾಟಕ ಪ್ರದೇಶದ ಸಾರ್ವಜನಿಕರಿಂದ ನೇಮಕಾತಿಯಲ್ಲಿ ಮೀಸಲಾತಿಗಾಗಿ ಪರಿಚ್ಛೇದ 371(ಜೆ) ರಡಿಯಲ್ಲಿ ವಸತಿ ಪ್ರಮಾಣ ಪತ್ರ ಮತ್ತು ಅರ್ಹತಾ ಪ್ರಮಾಣ ಪತ್ರಗಳಿಗಾಗಿ ಕೈಬರಹದ ಅರ್ಜಿಯನ್ನು ಪಡೆಯದೇ, ನಾಡಕಛೇರಿ ತಂತ್ರಾಂಶದಲ್ಲಿ ಅಳವಡಿಸಿದ ಅರ್ಜಿ ನಮೂನೆಯಲ್ಲಿ ಪಡೆದು ತಂತ್ರಾಂಶದಲ್ಲಿ ಅಳವಡಿಸಿದ ಪ್ರಮಾಣ ಪತ್ರವನ್ನು ವಿತರಿಸುವ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 61 ಎಹೆಚ್ಎಸ್ 2015; ಬೆಂಗಳೂರು, ದಿನಾಂಕ:31-07-2015**

ಹೈದರಾಬಾದ್ ಕರ್ನಾಟಕ ಪ್ರದೇಶದ ಸಾರ್ವಜನಿಕರಿಗೆ ನೇಮಕಾತಿಯಲ್ಲಿ ಮೀಸಲಾತಿಗಾಗಿ ಪರಿಚ್ಛೇದ 371(ಜೆ) ರಡಿಯಲ್ಲಿ ವಸತಿ ಪ್ರಮಾಣ ಪತ್ರ ಮತ್ತು ಅರ್ಹತಾ ಪ್ರಮಾಣ ಪತ್ರಗಳಿಗಾಗಿ ಇನ್ನು ಮುಂದೆ ನಾಡಕಛೇರಿ ತಂತ್ರಾಂಶದಲ್ಲಿ ಅಳವಡಿಸಿರುವ ಅರ್ಜಿ ನಮೂನೆಯಲ್ಲಿಯೇ ಅರ್ಜಿಯನ್ನು ಪಡೆದು, ನಂತರ ಅರ್ಜಿಯನ್ನು ಸಂಸ್ಕರಿಸಿ ಅನುಮೋದನೆಗೊಂಡ ನಾಡಕಛೇರಿಯಲ್ಲಿ ಅಳವಡಿಸಿದ ಸದರಿ ಪ್ರಮಾಣ ಪತ್ರಗಳಿಗೆ ತಹಶೀಲ್ದಾರ್/ಉಪವಿಭಾಗಾಧಿಕಾರಿಗಳಿಂದ ವಿದ್ಯುನ್ಮಾನವಾಗಿ ಸಹಿ ಮಾಡಿದ ಪ್ರಮಾಣ ಪತ್ರಗಳನ್ನು ವಿತರಿಸಬೇಕೆಂದು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 598 ವೆಚ್ಚ-7/2015 ದಿನಾಂಕ: 30-06-2015 ಮತ್ತು ಪರಿಯೋಜನಾ ರಚನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ ರವರ ಟಿಪ್ಪಣಿ ಸಂಖ್ಯೆ:ಪಿಡಿ 46 ಪಿಎಫ್ಓ 2015 ದಿನಾಂಕ:06-07-2015ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ನಿರಂಜನ ಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ (ಭೂಮಾಪನ)
31/7

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ರಾಜ್ಯದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100ಪ್ರತಿಗಳನ್ನು ಕಂದಾಯ ಇಲಾಖೆಗೆ ಕಳುಹಿಸುವಂತೆ ಕೋರಿದೆ.

**ಪ್ರತಿಯನ್ನು:**

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ & ಇ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3) ಮಾನ್ಯ ಮುಖ್ಯಮಂತ್ರಿಗಳವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಆ & ಸ) ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
8) ಎಲ್ಲಾ ಪ್ರಾದೇಶಿಕ ಆಯುಕ್ತರು/ಎಲ್ಲಾ ಜಿಲ್ಲಾಧಿಕಾರಿಗಳು/ಎಲ್ಲಾ ಉಪವಿಭಾಗಾಧಿಕಾರಿಗಳು/ಎಲ್ಲಾ ತಹಶೀಲ್ದಾರರು ರವರಿಗೆ ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯ ರವರ ಮುಖಾಂತರ.
9) ಆಯುಕ್ತರು, ಭೂಮಾಪನ ಹಾಗೂ ನಿರ್ದೇಶಕರು, ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯ, ಎಸ್.ಎಸ್.ಎಲ್.ಆರ್ ಕಟ್ಟಡ ಕೆ.ಆರ್.ವೃತ್ತ, ಬೆಂಗಳೂರು.
10) ಹೆಚ್ಚುವರಿ ಪ್ರತಿ ಮತ್ತು ಶಾಖಾ ರಕ್ಷಾ ಕಡತ.